**Akashvani : Bangalore**
**Regional Bulletin In Kannada**
**15.08.2026 / 18.40 hrs**

ಆಕಾಶವಾಣಿ ಬೆಂಗಳೂರು

ಪ್ರದೇಶ ಸಮಾಚಾರ

ಮುಖ್ಯಾಂಶಗಳು

**೧. ರಾಜ್ಯಾದ್ಯಂತ ಇಂದು ೮೦ನೇ ಸ್ವಾತಂತ್ರ್ಯ ದಿನಾಚರಣೆ ; ಇದೇ ೧೭ರವರೆಗೆ ಹರ್ ಘರ್ ತಿರಂಗಾ ಸಂಭ್ರಮ**

**೨. ರಾಜ್ಯದ ಜಿಲ್ಲಾ ಕೇಂದ್ರಗಳಲ್ಲಿ ಉಸ್ತುವಾರಿ ಸಚಿವರಿಂದ ರಾಷ್ಟ್ರಧ್ವಜಾರೋಹಣ; ಗೌರವ ಸಮರ್ಪಣೆ**

**೩. ಸಂಪರ್ಕ ವ್ಯವಸ್ಥೆ ವಂಚಿತ ಪ್ರದೇಶಗಳಿಗಾಗಿ ಸಾರಿಗೆ ವ್ಯವಸ್ಥೆ ಕಲ್ಪಿಸಲು ೧೫ ಸಾವಿರ ಹೊಸ ಬಸ್ ಖರೀದಿ ; ಸಚಿವ ಬಿ.ಎಸ್.ಸುರೇಶ್**

**೪. ಮುಂದಿನ ತಿಂಗಳ ೫ ರಿಂದ ೮ರವರೆಗೆ ರಾಯಚೂರಿನಲ್ಲಿ ದಕ್ಷಿಣ ಭಾರತ ಬ್ಯಾಡ್ಮಿಂಟನ್ ಟೂರ್ನಿ ಆಯೋಜನೆ**

**<><*<><>*><>**

ರಾಜ್ಯಾದ್ಯಂತ ಇಂದು ೮೦ನೇ ಸ್ವಾತಂತ್ರ್ಯ ದಿನವನ್ನು ಸಡಗರ ಸಂಭ್ರಮದಿಂದ ಆಚರಿಸಲಾಗುತ್ತಿದೆ. ಬೆಳಗ್ಗೆ ಪ್ರಭಾತ್ ಪೇರಿ ಹಾಗೂ ತ್ರಿವರ್ಣ ಧ್ವಜಾರೋಹಣ ನೆರವೇರಿಸಲಾಗಿದೆ. ಸರ್ಕಾರಿ ಇಲಾಖೆಗಳು ಹಾಗೂ ಸಂಘಸಂಸ್ಥೆಗಳು ರಾಷ್ಟ್ರ ಧ್ವಜಾರೋಹಣ ಕಾರ್ಯಕ್ರಮಗಳನ್ನು ಹಮ್ಮಿಕೊಂಡಿದ್ದವು. ರಾಜಕೀಯ ಪಕ್ಷಗಳು ಕೂಡ ತಮ್ಮ ಕಚೇರಿಗಳಲ್ಲಿ ಧ್ವಜಾರೋಹಣ ನೆರವೇರಿಸಿ ಸ್ವಾತಂತ್ರ್ಯಕ್ಕಾಗಿ ಹೋರಾಡಿದವರಿಗೆ ಗೌರವ ನಮನ ಸಲ್ಲಿಸಿದವು. ವಿವಿಧ ಸಂಘಸಂಸ್ಥೆಗಳ ಆಶ್ರಯದಲ್ಲಿ ಸಾಂಸ್ಕೃತಿಕ ಕಾರ್ಯಕ್ರಮಗಳನ್ನು ಈ ಸಂಜೆ ಆಯೋಜಿಸಲಾಗಿದೆ. ೮೦ನೇ ಸ್ವಾತಂತ್ರ್ಯೋತ್ಸವದ ಅಂಗವಾಗಿ ಕೇಂದ್ರ ಸರ್ಕಾರ ಹಮ್ಮಿಕೊಂಡಿರುವ ಮನೆ ಮನೆಗಳಲ್ಲಿ ಧ್ವಜಾರೋಹಣ ಕಾರ್ಯಕ್ರಮ ನಾಡಿದ್ದು ೧೭ನೇ ತಾರೀಖಿನವರೆಗೆ ನಡೆಯಲಿದೆ. ಇಂದು ಬೆಳಗ್ಗೆ ಲೋಕಭವನದಲ್ಲಿ ರಾಜ್ಯಪಾಲ ಥಾವರ್ ಚಂದ್ ಗೆಹ್ಲೋಟ್ ಧ್ವಜಾರೋಹಣ ನೆರವೇರಿಸಿದರು. ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಬೆಂಗಳೂರಿನಲ್ಲಿ ಆಯೋಜಿಸಲಾಗಿದ್ದ ಪ್ರಧಾನ ಸಮಾರಂಭದಲ್ಲಿ ತ್ರಿವರ್ಣ ಧ್ವಜಾರೋಹಣ ಮಾಡಿ ಗೌರವ ಸಲ್ಲಿಸಿದರು. ರಾಜ್ಯದ ಐತಿಹಾಸಿಕ ಕಟ್ಟಡಗಳಿಗೆ ವರ್ಣ ರಂಜಿತ ವಿದ್ಯುತ್ ಅಲಂಕಾರ ಮಾಡಲಾಗಿದ್ದು, ಬೆಂಗಳೂರಿನ ವಿಧಾನಸೌಧದಲ್ಲಿ ಫ್ರೀಡಂ ಹಬ್ಬ ಸಾಂಸ್ಕೃತಿಕ ಕಾರ್ಯಕ್ರಮ ನಡೆಯುತ್ತಿದೆ.

**<><*<><>*><>**

೮೦ನೇ ಸ್ವಾತಂತ್ರ್ಯೋತ್ಸವನ್ನು ರಾಜ್ಯದ ವಿವಿಧ ಜಿಲ್ಲೆಗಳಲ್ಲಿ ಇಂದು ಸಡಗರ ಸಂಭ್ರಮಗಳಿಂದ ಆಚರಿಸಲಾಯಿತು. ಜಿಲ್ಲಾ ಉಸ್ತುವಾರಿ ಸಚಿವರು ತ್ರಿವರ್ಣ ಧ್ವಜ ಹಾರಿಸಿ ಗೌರವ ಸಲ್ಲಿಸಿದರು. **ಬೆಳಗಾವಿಯ** ಜಿಲ್ಲಾ ಕ್ರೀಡಾಂಗಣದಲ್ಲಿ ಸಚಿವ ಸತೀಶ್ ಜಾರಕಿಹೊಳಿ ಧ್ವಜಾರೋಹಣ ನೆರವೇರಿಸಿ, ಗೌರವ ರಕ್ಷೆ ಸ್ವೀಕರಿಸಿದರು. ಅವರು ಮಾತನಾಡಿ, ಸ್ವಾತಂತ್ರ್ಯ ಹೋರಾಟದಲ್ಲಿ ಬೆಳಗಾವಿ ಜಿಲ್ಲೆಯ ಪಾತ್ರವು ವಿಶೇಷವಾದದ್ದು. ಸ್ವಾತಂತ್ರ್ಯ ಹೋರಾಟಕ್ಕೆ ಧುಮುಕಿದ ಮೊದಲ ಮಹಿಳೆ ಎಂಬ ಹೆಗ್ಗಳಿಕೆ ಹೊಂದಿದ್ದ ಕಿತ್ತೂರು ರಾಣಿ ಚೆನ್ನಮ್ಮ, ಆಂಗ್ಲರ ಈಸ್ಟ್ ಇಂಡಿಯಾ ಕಂಪೆನಿಗೆ ದುಸ್ವಪ್ನವಾಗಿ ಕಾಡಿದರು ಎಂದು ತಿಳಿಸಿದರು. ಸಮಾರಂಭದಲ್ಲಿ ಶಿಕ್ಷಣ, ಕ್ರೀಡೆ, ಸಮಾಜ ಸೇವೆ ಸೇರಿದಂತೆ ವಿವಿಧ ರಂಗಗಳಲ್ಲಿ ಸಾಧನೆ ಮಾಡಿದ ಗಣ್ಯರನ್ನು ಸನ್ಮಾನಿಸಲಾಯಿತು. **ಗದಗ** ನಗರದ ಕೆ.ಎಚ್.ಪಾಟೀಲ್ ಜಿಲ್ಲಾ ಕ್ರೀಡಾಂಗಣದಲ್ಲಿ ಜಿಲ್ಲಾ ಉಸ್ತುವಾರಿ ಸಚಿವ ಬಸವರಾಜ ರಾಯರೆಡ್ಡಿ, ರಾಷ್ಟ್ರ ಧ್ವಜಾರೋಹಣ ನೆರವೇರಿಸಿ, ಸ್ವಾತಂತ್ರ್ಯೋತ್ಸವದ ಶುಭ ಸಂದೇಶ ನೀಡಿದರು. ಇದೇ ಸಂದರ್ಭದಲ್ಲಿ ಗದಗ ಬೆಟಗೇರಿ ಅವಳಿ ನಗರದ ವಿವಿಧ ಶಾಲಾ ವಿದ್ಯಾರ್ಥಿಗಳಿಂದ ಸಾಂಸ್ಕೃತಿಕ ಕಾರ್ಯಕ್ರಮ ಜರುಗಿತು. **ಚಿಕ್ಕಮಗಳೂರು** ನಗರದ ಜಿಲ್ಲಾ ಆಟದ ಮೈಧಾನದಲ್ಲಿ ಸಚಿವ ಕೆ.ಜೆ.ಜಾರ್ಜ್ ಧ್ವಜಾರೋಹಣ ನೆರವೇರಿಸಿದರು. ಕಾರ್ಯಕ್ರಮದಲ್ಲಿ ಪೊಲೀಸ್ ಇಲಾಖೆ, ಅರಣ್ಯ ಇಲಾಖೆ, ಸ್ಕೌಟ್ಸ್ ಗೈಡ್ಸ್, ವಿವಿಧ ಶಾಲೆಗಳ ವಿದ್ಯಾರ್ಥಿಗಳಿಂದ ಆಕರ್ಷಕ ಪಥ ಸಂಚಲನ ನಡೆಯಿತು. **ಹಾವೇರಿಯ** ಹೊಸಮನಿ ಸಿದ್ದಪ್ಪ ಜಿಲ್ಲಾ ಕ್ರೀಡಾಂಗಣದಲ್ಲಿಂದು ಆಯೋಜಿಸಿದ್ದ ೮೦ನೇ ಸ್ವಾತಂತ್ರ್ಯ ದಿನಾಚರಣೆಯ

ಧ್ವಜಾರೋಹಣವನ್ನು ಸಚಿವ ರುದ್ರಪ್ಪ ಲಮಾಣಿ ನೆರವೇರಿಸಿದರು. ನಂತರ ಮಾತನಾಡಿದ ಅವರು, ಸ್ವಾತಂತ್ರ್ಯ ಎರಡು ಶತಮಾನಗಳ ಕಾಲ ಅಸಂಖ್ಯಾತ ಭಾರತೀಯರು ನಡೆಸಿದ ನಿರಂತರ ಹೋರಾಟ, ಹೋರಾಟಗಾರರ ತ್ಯಾಗ, ಧೈರ್ಯ ಮತ್ತು ಅಚಲ ಸಂಕಲ್ಪದ ಫಲವಾಗಿದೆ ಎಂದರು. ಸಾಂಸ್ಕೃತಿಕ ನಗರಿ **ಮೈಸೂರಿನ** ಬನ್ನಿಮಂಟಪದ ಪಂಜಿನ ಕವಾಯಿತು ಮೈದಾನದಲ್ಲಿ ಜಿಲ್ಲಾಡಳಿತ ಹಮ್ಮಿಕೊಂಡಿದ್ದ ಮುಖ್ಯ ಸಮಾರಂಭದಲ್ಲಿ, ಸಚಿವ ಡಾ.ಯತೀಂದ್ರ ಸಿದ್ದರಾಮಯ್ಯ ಧ್ವಜಾರೋಹಣ ನೆರವೇರಿಸಿದರು. ಬಳಿಕ ಮಾತನಾಡಿದ ಅವರು, ಡಾ.ಬಿ.ಆರ್.ಅಂಬೇಡ್ಕರ್ ಅವರು ನೀಡಿದ ಸರ್ವಶ್ರೇಷ್ಠ ಸಂವಿಧಾನ ಹಾಗೂ ಜವಾಹರ್‌ಲಾಲ್ ನೆಹರೂ, ಲಾಲ್ ಬಹಾದ್ದೂರ್ ಶಾಸ್ತ್ರಿ ಸೇರಿದಂತೆ ಹಲವು ಮಹನೀಯರ ದೂರದೃಷ್ಟಿಯ ಆಡಳಿತದಿಂದ ಭಾರತ ಇಂದು ಪ್ರಪಂಚದಲ್ಲೇ ಬಲಿಷ್ಠ ರಾಷ್ಟ್ರವಾಗಿ ಹೊರಹೊಮ್ಮಿದೆ. ಮೈಸೂರು ಸಂಸ್ಥಾನದ ಅಭಿವೃದ್ಧಿಗೆ ಕೊಡುಗೆ ನೀಡಿದ ನಾಲ್ವಡಿ ಕೃಷ್ಣರಾಜ ಒಡೆಯರ್, ದಿವಾನರು ಹಾಗೂ ರಾಜಮಾತೆಯರ ಕೊಡುಗೆ ಸ್ಮರಣೀಯ ಎಂದರು. **ವಿಜಯನಗರ** ಜಿಲ್ಲಾಡಳಿತ ಜಿಲ್ಲಾ ಪಂಚಾಯತ್ ಮತ್ತು ನಗರ ಸಭೆಯ ಸಹಯೋಗದಲ್ಲಿ ಆಯೋಜಿಸಲಾಗಿದ್ದ ಸ್ವಾತಂತ್ರ್ಯೋತ್ಸವ ಕಾರ್ಯಕ್ರಮದಲ್ಲಿ ಜಿಲ್ಲಾ ಉಸ್ತುವಾರಿ ಸಚಿವ ಕೆ.ಎಸ್.ಬಸವಂತಪ್ಪ ಧ್ವಜಾರೋಹಣ ನೆರವೇರಿಸಿ ಮಾತನಾಡಿದರು. ಇದೇ ಸಂದರ್ಭದಲ್ಲಿ ಜಿಲ್ಲೆಯ ವಿವಿಧ ಇಲಾಖೆಗಳಲ್ಲಿ ಉತ್ತಮ ಸೇವೆ ನೀಡಿದ ದಕ್ಷ ಅಧಿಕಾರಿಗಳಿಗೆ ಜಿಲ್ಲಾ ಮಟ್ಟದ ಸರ್ವೋತ್ತಮ ಸೇವಾ ಪ್ರಶಸ್ತಿಗಳನ್ನು ನೀಡಲಾಯಿತು. **ಗದಗ** ನಗರದ ಬಿಜೆಪಿ ಜಿಲ್ಲಾ ಕಾರ್ಯಾಲಯದಲ್ಲಿ ಮಾಜಿ ಮುಖ್ಯಮಂತ್ರಿ ಹಾಗೂ ಹಾವೇರಿ ಲೋಕಸಭಾ ಕ್ಷೇತ್ರದ ಸಂಸದ ಬಸವರಾಜ ಬೊಮ್ಮಾಯಿ ಧ್ವಜಾರೋಹಣ ನೇರವೇರಿಸಿದರು. ನಂತರ ಮಾತನಾಡಿದ ಅವರು, ದೇಶದ ಸ್ವಾತಂತ್ರ್ಯಕ್ಕಾಗಿ ಹೋರಾಡಿದ ಮಹನೀಯರುಗಳನ್ನು ಸ್ಮರಿಸುವುದು ಜನರೆಲ್ಲರ ಆದ್ಯ ಕರ್ತವ್ಯವಾಗಿದೆ ಎಂದರು. ನೈರುತ್ಯ ರೈಲ್ವೆಯ ಬೆಂಗಳೂರು ವಿಭಾಗವು ರೈಲ್ವೆ ಮೈದಾನದಲ್ಲಿ ಏರ್ಪಡಿಸಿದ್ದ ಸ್ವಾತಂತ್ರ್ಯ ದಿನ ಕಾರ್ಯಕ್ರಮದಲ್ಲಿ ವಿಭಾಗೀಯ ರೈಲ್ವೆ ವ್ಯವಸ್ಥಾಪಕ ಆಶುತೋಷ್ ಕುಮಾರ್ ಸಿಂಗ್ ಅವರು ಧ್ವಜಾರೋಹಣವನ್ನು ನೆರವೇರಿಸಿದರು. ಈ ಸಂದರ್ಭದಲ್ಲಿ 'ಹರ್ ಘರ್ ತಿರಂಗಾ' ಅಭಿಯಾನದ ಅಂಗವಾಗಿ ಆಯೋಜಿಸಲಾಗಿದ್ದ ವಿವಿಧ ಸ್ಪರ್ಧೆಗಳ ವಿಜೇತರಿಗೆ ಬಹುಮಾನಗಳನ್ನು ವಿತರಿಸಲಾಯಿತು.

**<><*<><>*><>**

ರಾಜ್ಯದ ಗ್ರಾಮಾಂತರ ಪ್ರದೇಶಗಳೂ ಸೇರಿದಂತೆ ಸಂಪರ್ಕ ವ್ಯವಸ್ಥೆ ವಂಚಿತ ಪ್ರದೇಶಗಳಿಗಾಗಿ ೧೫ ಸಾವಿರ ಹೊಸ ಬಸ್‌ಗಳನ್ನು ಖರೀದಿಸಲಾಗುತ್ತಿದೆ ಎಂದು ಸಾರಿಗೆ ಸಚಿವ ಬಿ.ಎಸ್.ಸುರೇಶ್ ಹೇಳಿದ್ದಾರೆ. ಚಿಕ್ಕಬಳ್ಳಾಪುರದಲ್ಲಿಂದು ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಸರ್ಕಾರಿ ಸ್ವಾಮ್ಯದ ನಾಲ್ಕು ಸಾರಿಗೆ ನಿಗಮಗಳ ಮೂಲಕ ೧೫ ಸಾವಿರ ಹೊಸ ಬಸ್‌ಗಳ ಖರೀದಿ ಪ್ರಕ್ರಿಯೆಗೆ ಚಾಲನೆ ನೀಡಲಾಗಿದೆ ಎಂದು ತಿಳಿಸಿದರು.

**<><*<><>*><>**

ಪಾನ್ ಮಸಾಲದಲ್ಲಿ ನಿಕೋಟಿನ್, ತಂಬಾಕು ಹಾಗೂ ಗುಟ್ಕಾ ಮಿಶ್ರಣ ಮಾಡಿ ಮಾರಾಟ ಮಾಡುವುದನ್ನು ನಿಷೇಧಿಸಲಾಗಿದೆ. ಆದರೆ ಶುದ್ಧ ಪಾನ್ ಮಸಾಲ ಪ್ರತ್ಯೇಕವಾಗಿ ಬಂದರೆ ಯಾವುದೇ ತೊಂದರೆ ಇಲ್ಲ. ಈ ಕ್ರಮದಿಂದ ಅಡಿಕೆ ಬೆಳೆಗಾರರಿಗೆ ಯಾವುದೇ ನಷ್ಟವಾಗುವುದಿಲ್ಲ ಎಂದು ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವ ಯು.ಟಿ.ಖಾದರ್ ಹೇಳಿದ್ದಾರೆ. ಮಂಗಳೂರಿನಲ್ಲಿಂದು ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ೨೦೧೩ರಲ್ಲಿ ಗುಟ್ಕಾ ನಿಷೇಧಿಸಿದಾಗಲೂ ಅಡಿಕೆ ಬೆಲೆ ಇಳಿಕೆಯಾಗಲಿದೆ ಎಂದು ಅಪಪ್ರಚಾರ ಮಾಡಲಾಗಿತ್ತು. ಆದರೆ ಆ ಬಳಿಕ ಅಡಿಕೆ ಧಾರಣೆ ಜಸ್ತಿಯಾಯಿತೇ ಹೊರತು ಕಡಿಮೆಯಾಗಲಿಲ್ಲ. ಈಗಲೂ ಅಡಿಕೆ ಬೆಳೆಗಾರರಿಗೆ ಅಥವಾ ವ್ಯಾಪಾರಿಗಳಿಗೆ ಯಾವುದೇ ಸಮಸ್ಯೆಯಾಗುವುದಿಲ ಎಂದರು.

**<><*<><>*><>**

ಸಾರ್ವಜನಿಕರ ಸಮಸ್ಯೆಗಳಿಗೆ ತ್ವರಿತವಾಗಿ ಸ್ಪಂದಿಸಿ, ಸಕಾಲದಲ್ಲಿ ಸೂಕ್ತ ಪರಿಹಾರ ಒದಗಿಸುವ ಉದ್ದೇಶದಿಂದ ರಾಜ್ಯ ಸರ್ಕಾರ 'ಪ್ರಜಾ ಸೇವಾ' ಯೋಜನೆಯನ್ನು ಪ್ರಾರಂಭಿಸಿದೆ ಎಂದು ಪರಿಶಿಷ್ಟ ಪಂಗಡಗಳ ಕಲ್ಯಾಣ ಖಾತೆ ಸಚಿವ ಟಿ.ರಘುಮೂರ್ತಿ ತಿಳಿಸಿದ್ದಾರೆ. ಚಿತ್ರದುರ್ಗ ನಗರದ ಜಿಲ್ಲಾ ಪಂಚಾಯಿತಿ ಕಚೇರಿಯಲ್ಲಿ ಜಿಲ್ಲಾ ಪಂಚಾಯತ್ ವತಿಯಿಂದ ನೂತನವಾಗಿ ಆರಂಭಿಸಲಾಗಿರುವ 'ಪ್ರಜಾ ಸೇವಾ ಶಾಖೆ'ಯನ್ನು ಉದ್ಘಾಟಿಸಿ ಅವರು ಮಾತನಾಡಿದರು.

**<><*<><>*><>**

೮೦ನೇ ಸ್ವಾತಂತ್ರ್ಯೋತ್ಸವದ ಅಂಗವಾಗಿ ಬೆಂಗಳೂರು ಸೇರಿದಂತೆ ರಾಜ್ಯದ ವಿವಿಧ ಜಿಲ್ಲೆಗಳಲ್ಲಿ ನಡೆದ ತ್ರಿವರ್ಣ ಧ್ವಜಾರೋಹಣ ಕಾರ್ಯಕ್ರಮದ ವರದಿಯನ್ನು ಬೆಂಗಳೂರು ಆಕಾಶವಾಣಿ ಸುದ್ದಿವಿಭಾಗ ಇಂದು ರಾತ್ರಿ ಪ್ರಸ್ತುತಪಡಿಸಲಿದೆ. ಸಮಯ ೮.೪೫ ರಿಂದ ಈ ಕಾರ್ಯಕ್ರಮ ಬಿತ್ತರಗೊಳ್ಳಲಿದ್ದು, ರಾಜ್ಯದ ಎಲ್ಲ ಬಾನುಲಿ ಕೇಂದ್ರಗಳಿಂದ ಪ್ರಸಾರವಾಗಲಿದೆ.

<><*<><>*><>

ಹಿರಿಯ ಶಿಲ್ಪ ಹಾಗೂ ಕಾಷ್ಠ ಕಲಾವಿದ ಚಂದ್ರಶೇಖರ್ ವೈ. ಶಿಲ್ಪಿ ಕಲಬುರಗಿಯಲ್ಲಿ ಇಂದು ನಿಧನ ಹೊಂದಿದರು. ಅವರಿಗೆ ೭೨ ವರ್ಷ ವಯಸ್ಸಾಗಿತ್ತು. ಸುರಪುರ ಶೈಲಿಯ ಸೂಕ್ಷ್ಮ ಕಲಾ ಕೆತ್ತನೆಯಲ್ಲಿ ಹೆಸರು ಮಾಡಿದ್ದ ಚಂದ್ರಶೇಖರ್ ಶಿಲ್ಪಿ ಅವರಿಗೆ ಜವಳಿ ಸಚಿವಾಲಯ ನೀಡುವ ರಾಷ್ಟ್ರೀಯ ಪ್ರಶಸ್ತಿಯನ್ನು ರಾಷ್ಟ್ರಪತಿ ದ್ರೌಪದಿ ಮುರ್ಮು ಕಳೆದ ಡಿಸೆಂಬರ್‌ನಲ್ಲಿ ಪ್ರದಾನ ಮಾಡಿದ್ದರು. ಅವರು, ಶಿಲ್ಪ ಅಕಾಡೆಮಿಯ ಗೌರವ ಪ್ರಶಸ್ತಿ, ರಾಜ್ಯೋತ್ಸವ ಪ್ರಶಸ್ತಿ ಸೇರಿದಂತೆ ಹಲವು ಪುರಸ್ಕಾರಗಳಿಗೆ ಭಾಜನರಾಗಿದ್ದರು.

<><*<><>*><>

ಮುಂದಿನ ತಿಂಗಳ ೫ ರಿಂದ ೮ರವರೆಗೆ ರಾಯಚೂರಿನಲ್ಲಿ ದಕ್ಷಿಣ ಭಾರತ ಬ್ಯಾಡ್ಮಿಂಟನ್ ಟೂರ್ನಿ ನಡೆಯಲಿದೆ. ಕರ್ನಾಟಕ ಬ್ಯಾಡ್ಮಿಂಟನ್ ಅಸೋಸಿಯೇಷನ್ ನೇತೃತ್ವದಲ್ಲಿ ಈ ಪಂದ್ಯಾವಳಿ ಆಯೋಜಿಸಲಾಗಿದೆ ಎಂದು ಸಂಘದ ರಾಜ್ಯಾಧ್ಯಕ್ಷ ಕುಮಾರ ಬಂಗಾರಪ್ಪ ತಿಳಿಸಿದ್ದಾರೆ. ರಾಯಚೂರಿನಲ್ಲಿಂದು ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಪ್ರತಿ ಆರು ವರ್ಷಕ್ಕೊಮ್ಮೆ ಕರ್ನಾಟಕಕ್ಕೆ ಒಲಿಯುವ ದಕ್ಷಿಣ ಭಾರತ ಮಟ್ಟದ ಈ ಬೃಹತ್ ಕ್ರೀಡಾಕೂಟವನ್ನು ಸಾಮಾನ್ಯವಾಗಿ ಬೆಂಗಳೂರಿನಲ್ಲಿ ಆಯೋಜಿಸಲಾಗುತ್ತಿತ್ತು. ಆದರೆ ಈ ಬಾರಿ ಗ್ರಾಮೀಣ ಭಾಗ ಹಾಗೂ ಹಿಂದುಳಿದ ಕಲ್ಯಾಣ ಕರ್ನಾಟಕ ಭಾಗದ ಕ್ರೀಡಾಪಟುಗಳಿಗೆ ಪ್ರೋತ್ಸಾಹ ನೀಡುವ ಉದ್ದೇಶದಿಂದ ರಾಯಚೂರು ಜಿಲ್ಲೆಯನ್ನು ಆಯ್ಕೆ ಮಾಡಲಾಗಿದೆ ಎಂದರು. ಈ ಕ್ರೀಡಾಕೂಟದಲ್ಲಿ ತೆಲಂಗಾಣ, ಆಂಧ್ರಪ್ರದೇಶ, ತಮಿಳುನಾಡು, ಕೇರಳ, ಪುದುಚೇರಿ, ಅಂಡಮಾನ್ ಮತ್ತು ನಿಕೋಬಾರ್ ಹಾಗೂ ಆತಿಥೇಯ ಕರ್ನಾಟಕ ಸೇರಿದಂತೆ ಒಟ್ಟು ೭ ರಾಜ್ಯಗಳಿಂದ ಸುಮಾರು ೨೫೦ ರಿಂದ ೩೦೦ ಪ್ರಮುಖ ಕ್ರೀಡಾಪಟುಗಳು ಸೇರಿದಂತೆ ತರಬೇತುದಾರರು ಮತ್ತು ತಾಂತ್ರಿಕ ತಂಡದ ಸದಸ್ಯರು ಭಾಗವಹಿಸಲಿದ್ದಾರೆ ಎಂದು ಕುಮಾರ್ ಬಂಗಾರಪ್ಪ ಮಾಹಿತಿ ನೀಡಿದರು. ಈ ವೇಳೆ ಟೂರ್ನಿಯ ಅಧಿಕೃತ ಲೋಗೋವನ್ನು ಬಿಡುಗಡೆ ಮಾಡಿದರು.

<><*<><>*><>

ಕೋಲಾರ ಜಿಲ್ಲೆಯ ಉದಯೋನ್ಮುಖಿ ಗಾಲ್ಫ್ ಪ್ರತಿಭೆ ಅದ್ವೈತ್, ಇಂಗ್ಲೆಂಡ್‌ನ ದಿ ಬೆಲ್ಫ್ರಿ ನಲ್ಲಿ ನಡೆಯಲಿರುವ ಫಾಲ್ಡೋ ಫ್ಯೂಚರ್ಸ್ ಫೈನಲ್-೨೦೨೬ ಅಂತಾರಾಷ್ಟ್ರೀಯ ಗಾಲ್ಫ್ ಪಂದ್ಯಾವಳಿಯಲ್ಲಿ ಭಾಗವಹಿಸುವ ಅವಕಾಶ ಪಡೆದಿದ್ದಾರೆ.

**<><*<> ಇಲ್ಲಿಗೆ ಪ್ರದೇಶ ಸಮಾಚಾರ ಮುಗಿಯಿತು <>*><>**

**<><*<>ನಮ್ಮ ಮುಂದಿನ ವಾರ್ತಾ ಪ್ರಸಾರ ರಾತ್ರಿ ೭.೩೫ ಕ್ಕೆ <>*><>**